ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**ದೂರವಾಣಿ: 080-22343904/05.**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2018-19

ದಿನಾಂಕ: 25.10.2018

# ಸುತ್ತೋಲೆ

**ವಿಷಯ:** ದಿನಾಂಕ: 31.10.2018 ರಂದು ರಾಜ್ಯಾದ್ಯಂತ " ರಾಷ್ಟ್ರೀಯ ಏಕತಾ ದಿವಸ" ವನ್ನು ಆಚರಿಸುವ ಬಗ್ಗೆ.

**ಉಲ್ಲೇಖ:**
1. ಮಾನ್ಯ ಗೃಹ ಮಂತ್ರಿಗಳು, ಭಾರತ ಸರ್ಕಾರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: I-19034/03/2018-NI-II dt:04.09.2018.
2. ಸರ್ಕಾರದ ಪತ್ರ ಸಂಖ್ಯೆ: ಸಿಆಸುಇ 2 ರಾಏಸ 2018, ದಿನಾಂಕ:05.10.2018.

* * * * * *

ದಿವಂಗತ ಸರ್ದಾರ್ ವಲ್ಲಭಭಾಯ್ ಪಟೇಲ್‌ರವರ ಜನ್ಮದಿನದ ಪ್ರಯುಕ್ತ ದಿನಾಂಕ:31.10.2018 ರಂದು "ರಾಷ್ಟ್ರೀಯ ಏಕತಾ ದಿವಸ" ವನ್ನು ಆಚರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿದೆ. ಈ ಸಂಬಂಧ, ಸದರಿ ದಿನದಂದು ಹಮ್ಮಿಕೊಳ್ಳಬೇಕಾಗಿರುವ ಕಾರ್ಯಕ್ರಮದ ವಿವರಗಳು ಹಾಗೂ ಪ್ರಮಾಣ ವಚನದ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದ್ದು, ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಅನುದಾನ ರಹಿತ ಕಾಲೇಜುಗಳಲ್ಲಿ ದಿನಾಂಕ: 31.10.2018 ರಂದು "ರಾಷ್ಟ್ರೀಯ ಏಕತಾ ದಿವಸ" ವನ್ನು ಅರ್ಥಪೂರ್ಣವಾಗಿ ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ. ಈ ದಿನವನ್ನು ಆಚರಿಸುವಾಗ, ಸಾರ್ವಜನಿಕರನ್ನು ಮತ್ತು ಸ್ವಯಂ ಸೇವಾ ಸಂಸ್ಥೆಗಳನ್ನು ಭಾಗಿಗಳನ್ನಾಗಿ ಮಾಡಿಕೊಂಡಲ್ಲಿ, ಈ ಕಾರ್ಯಕ್ರಮವು ಹೆಚ್ಚಿನ ರೀತಿಯಲ್ಲಿ ಯಶಸ್ವಿಗೊಳಿಸಿದಂತಾಗುತ್ತದೆ.

27-10-18

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ,**

1) ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3) ಆಯುಕ್ತರ, ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ ಆಪ್ತಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿ:**

1) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ರಾಜಕೀಯ), ನಂ.360, 3ನೇ ಮಹಡಿ, ವಿಧಾನಸೌಧ, ಬೆಂಗಳೂರು-560001.
2) ಕಛೇರಿ ಪ್ರತಿ.